# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

ಮಂಗಳವಾರ, ದಿನಾಂಕ:10ನೇ ಮಾರ್ಚ್, 2026

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

## 2. ಶೂನ್ಯವೇಳೆ ಪ್ರಸ್ತಾವಗಳು

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ಧರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

i. ಭಾರತ ಸಂವಿಧಾನದ ಅನುಚ್ಛೇದ 243(i) ಮತ್ತು (y)ರ ಮೇರೆಗೆ ರಾಜ್ಯದ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಕುರಿತಾದ ಐದನೇ ರಾಜ್ಯ ಹಣಕಾಸು ಆಯೋಗದ 2026-2030ನೇ ಸಾಲಿನ ವರದಿಯನ್ನು ಸಭೆಯ ಮುಂದಿಡುವುದು;

ii. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪ್ರದೇಶ ವ್ಯಾಪ್ತಿಯ ಬೆಂಗಳೂರು ಪಶ್ಚಿಮ, ದಕ್ಷಿಣ, ಉತ್ತರ, ಪೂರ್ವ ಮತ್ತು ಕೇಂದ್ರ ನಗರ ಪಾಲಿಕೆಗಳ 2026-2030ನೇ ಸಾಲಿನ ವರದಿಯನ್ನು ಸಭೆಯ ಮುಂದಿಡುವುದು;

..2

## 4. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಐವನ್ ಡಿ'ಸೋಜಾ.** ಅವರು ಕರ್ನಾಟಕ ಗೇರು ಅಭಿವೃದ್ಧಿ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ 7ನೇ ವೇತನ ಆಯೋಗದ ವರದಿ ಜಾರಿಯಾಗದ ಕಾರಣ ವೇತನ ಹಾಗೂ ಇತರೆ ಭತ್ಯೆಗಳು ಸಿಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಕುರಿತು **ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ** ಗಮನ ಸೆಳೆಯುವುದು.

2. **ಶ್ರೀ ರಮೇಶ್ ಬಾಬು** ಅವರು ಬೆಂಗಳೂರಿನ ಪ್ರತಿಷ್ಠಿತ ಕೆಂಪೇಗೌಡ ರಸ್ತೆಯ (ಮೈಸೂರು ಬ್ಯಾಂಕ್ ಬಳಿ) ಒಂದನೇ ತಿರುವಿನಲ್ಲಿರುವ ಆಸ್ಪತ್ರೆ ರಸ್ತೆಗೆ ಹೋಗುವ ದಾರಿಯಲ್ಲಿ ರಸ್ತೆಯ ಎರಡು ಬದಿಗಳಲ್ಲಿ ಕಾನೂನು ಬಾಹಿರವಾಗಿ ವಾಹನ ನಿಲುಗಡೆ ಮಾಡುತ್ತಿರುವುದರಿಂದ ಆಗುತ್ತಿರುವ ತೊಂದರೆಗಳ ಕುರಿತು **ಮಾನ್ಯ ಗೃಹ ಸಚಿವರ** ಗಮನ ಸೆಳೆಯುವುದು.

3. **ಶ್ರೀ ಶಿವಕುಮಾರ್ ಕೆ** ಅವರು ಆಸಿಡ್ ದಾಳಿಗೊಳಗಾದ ಸಂತ್ರಸ್ಥೆಯರಿಗೆ ವೈದ್ಯಕೀಯ ಚಿಕಿತ್ಸೆ, ಮಾಸಿಕ ಪರಿಹಾರ, ವೇತನ, ವಾಸಸ್ಥಳ ವಸತಿ ಸೌಲಭ್ಯ, ಸರ್ಕಾರಿ ಉದ್ಯೋಗ ಮತ್ತು ಮೀಸಲಾತಿ ಒದಗಿಸುವ ಕುರಿತು **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ** ಗಮನ ಸೆಳೆಯುವುದು.

## 5. ನಿಯಮ 330ರ ಮೇರೆಗೆ

1. **ಡಾ. ಕೆ. ಗೋವಿಂದರಾಜ್** ಅವರು ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಹನ ಸಂಚಾರ ದಟ್ಟಣೆ, ಕಾನೂನು ಸುವ್ಯವಸ್ಥೆ ಮತ್ತು ಕ್ರಿಮಿನಲ್ ಪ್ರಕರಣಗಳ ಸಮಸ್ಯೆಗಳ ಪರಿಹಾರಕ್ಕಾಗಿ ಪೋಲೀಸ್ ಆಯುಕ್ತರ ಮತ್ತೊಂದು ಹುದ್ದೆ ಹಾಗೂ ಇನ್ನಿತರ ಪೂರಕ ಹುದ್ದೆಗಳನ್ನು ಹೊಸದಾಗಿ ಸೃಜಿಸಿ ಪೋಲೀಸ್ ಇಲಾಖೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕ್ರಮವಹಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

2. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು ಟೇಕಲ್ ಹೋಬಳಿ, ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ದಾನವಾಗಿ ನೀಡಲಾದ ಭೂಮಿಯ ಅತಿಕ್ರಮಣ ಹಾಗೂ ದಾಖಲೆಯ ವಂಚನೆ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಕಂದಾಯ ಸಚಿವರು)

3. **ಶ್ರೀ ಎಂ. ನಾಗರಾಜು** ಅವರು ರಾಜ್ಯ ರಾಜಧಾನಿಯಾದ ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣವನ್ನು ಅಂತರಾಷ್ಟ್ರೀಯ ಬಸ್ ನಿಲ್ದಾಣದ ಮಾದರಿಯಲ್ಲಿ ಮರು ಅಭಿವೃದ್ಧಿಪಡಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಸಾರಿಗೆ ಸಚಿವರು)

4. **ಡಾ: ತಳವಾರ್ ಸಾಬಣ್ಣ** ಅವರು ಹಿಂದುಳಿದ ವರ್ಗಗಳಲ್ಲಿ ಬರುವ ಜಾತಿಗಳ ಕುಲ ಕಸಬುಗಳು ನಶಿಸುತ್ತಿರುವುದರಿಂದ ಅವುಗಳನ್ನು ಉತ್ತೇಜಿಸಿ ಆರ್ಥಿಕ ಭದ್ರತೆ ಕಲ್ಪಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

5. **ಶ್ರೀಯುತರುಗಳಾದ ಸೂರಜ್ ರೇವಣ್ಣ, ನಿರಾಣಿ ಹಣಮಂತ ರುದ್ರಪ್ಪ, ಎಸ್.ಎಲ್. ಭೋಜೇಗೌಡ, ನವೀನ್ ಕೆ.ಎಸ್. ಮತ್ತು ಪ್ರದೀಪ್ ಶೆಟ್ಟರ್** ಅವರುಗಳು ರಾಜ್ಯದ ಬಯಲುನಾಡಿನ ಜಿಲ್ಲೆಗಳಾದ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸುವ ವಿಚಾರ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)

6. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ನಗರದ ಹುಲಿಕೆರೆಯ ಮೂಲ ಪ್ರದೇಶ ಹಾಗೂ ಸುತ್ತಮುತ್ತಲಿನ ಬಫರ್ ಜೋನ್ ಪ್ರದೇಶದ ಅತಿಕ್ರಮಣ ತಡೆಗಟ್ಟಲು ಮರುಅಳತೆ ಮಾಡಿಸಿ ನಿಖರ ಗಡಿ ಗುರುತಿಸುವುದು ಮತ್ತು ಅತಿಕ್ರಮಣ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ನಗರಾಭಿವೃದ್ಧಿ ಸಚಿವರು)

## 6. ವಿತ್ತೀಯ ಕಾರ್ಯಕಲಾಪ

2026-27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ
ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council/council.htm